ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಚಿವ ಸಂಪುಟ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 31/12/2019

ಆಸ್ತಿ ಮುಟ್ಟುಗೋಲು ಕಾಯ್ದೆ ಇಲ್ಲ

ಉದಯವಾಣಿ 31/12/19

ಸರ್ಕಾರಿ ಆಸ್ತಿಗೆ ಹಾನಿ । ಕಾನೂನು ಜಾರಿ ಕುರಿತು ಚರ್ಚೆಯಾಗಿಲ್ಲ: ಸಚಿವ

ಬೆಂಗಳೂರು: ಪ್ರತಿಭಟನೆ ಹಾಗೂ ಹೋರಾಟದ ಸಂದರ್ಭದಲ್ಲಿ ಸರ್ಕಾರಿ ಆಸ್ತಿಗೆ ಹಾನಿ ಮಾಡಿದವರ ಆಸ್ತಿ ಮುಟ್ಟುಗೋಲು ಹಾಕುವ ಕುರಿತು ಯಾವುದೇ ಕಾಯ್ದೆ ಜಾರಿ ಇಲ್ಲ ಎಂದು ಕಾನೂನು ಸಚಿವ ಜೆ.ಸಿ. ಮಾಧುಸ್ವಾಮಿ ಹೇಳಿದ್ದಾರೆ.

ಪ್ರತಿಭಟನೆ ಸಂದರ್ಭದಲ್ಲಿ [redacted] ದಂಡ ಹಾಗೂ ಶಿಕ್ಷೆ ವಿಧಿಸುವ ಬಗ್ಗೆ ಪ್ರಸ್ತಾಪ ಮಾಡಿದ್ದೆ ಆದರೆ, ಈ ಬಗ್ಗೆಯಾವುದೇ ನಿರ್ಧಾರವಾಗಿಲ್ಲ. ಉತ್ತರ ಪ್ರದೇಶ ಮಾದರಿಯಲ್ಲಿ ರಾಜ್ಯದಲ್ಲಿ ಯಾವುದೇ ಕಾನೂನು ಜಾರಿಗೆ ತಂದಿಲ್ಲ. ಸದ್ಯಕ್ಕೆ ಆ ರೀತಿಯ ಯಾವುದೇ ಚರ್ಚೆ ನಡೆದಿಲ್ಲ ಎಂದರು.

ಪೋಕ್ಸೊ ಕಾಯ್ದೆ ಅಡಿಯಲ್ಲಿ ಆಂಧ್ರಪ್ರದೇಶದಲ್ಲಿ 21 ದಿನದಲ್ಲಿ ಅತ್ಯಾಚಾರಿಗೆ ಶಿಕ್ಷೆ ನೀಡುವ ಕಾನೂನು ಜಾರಿಗೆ ತರಲು ನಿರ್ಧರಿಸಿದ್ದಾರೆ. ನಮ್ಮಕಾನೂನಿನಲ್ಲಿ ಒಂದು ಪ್ರಕರಣ ಇತ್ಯರ್ಥಗೊಳಿಸಲು ಕನಿಷ್ಠ ಮೂರು ವರ್ಷ ಸಮಯ ಬೇಕಾಗುತ್ತದೆ. ಆದರೆ, 21 ದಿನದಲ್ಲಿ ಹೇಗೆ ಶಿಕ್ಷೆ ಕೊಡಲು ಸಾಧ್ಯ ಎಂಬ ಪ್ರಶ್ನೆಉದ್ಭವಿಸುತ್ತದೆ. ನೂರು ಆರೋಪಿಗಳು ತಪ್ಪಿಸಿಕೊಂಡರೂ ಒಬ್ಬ ನಿರಪರಾಧಿಗೆ ಶಿಕ್ಷೆ ಆಗಬಾರದು ಎಂದು ನಮ್ಮ ಕಾನೂನು ಹೇಳುತ್ತದೆ. ಹೀಗಾಗಿ ಎಲ್ಲವನ್ನೂ ವಿಕಾವಿಕಿ ತೀರ್ಮಾನ ಕೈಗೊಳ್ಳಲು ಆಗುವುದಿಲ್ಲ ಎಂದರು.

ರಾಮನಗರ ಜಿಲ್ಲೆಯ ಕಪಾಲಿ ಬೆಟ್ಟದಲ್ಲಿ ಏಸು ಕ್ರಿಸ್ತನ ಪ್ರತಿಮೆ ನಿರ್ಮಾಣ ಮಾಡುವ ವಿಷಯವೂ ಸಂಪುಟದಲ್ಲಿಚರ್ಚೆಯಾಗಿಲ್ಲ. ಈ ಕುರಿತು ಸಂಪುಟ ಸಭೆಗೆ ಯಾವುದೇ ಕಡತ ಬಂದಿರಲಿಲ್ಲ. ಅಧಿಕೃತ ವಿಷಯಗಳನ್ನು ಬಿಟ್ಟು ಸಂಪುಟದಲ್ಲಿ ಬೇರೆ ಯಾವುದೇ ಚರ್ಚೆ ನಡೆಸಿಲ್ಲ ಎಂದು ಹೇಳಿದರು.

ಇದೇ ವೇಳೆ, ಬೆಂಗಳೂರಿನ ಭೂ ಒತ್ತುವರಿ ಪ್ರಕರಣಗಳ ಇತ್ಯರ್ಥ ವಿಳಂಬವಾಗುತ್ತಿದೆ ಎಂದು ಮಾಜಿ ಸಚಿವ ಎಚ್.ಕೆ. ಪಾಟೀಲ್ ಬರೆದಿರುವ ಪತ್ರಕ್ಕೆ ಪ್ರತಿಕ್ರಿಯಿಸಿದ ಅವರು, ಕೋರ್ಟ್‌ನಲ್ಲಿ ಕಾನೂನು ಬದ್ಧವಾಗಿ ವಿಚಾರಣೆ ನಡೆಯುತ್ತಿದೆ. ನ್ಯಾಯಾಲಯದ ವಿಚಾರದಲ್ಲಿ ಬೇಗ ತೀರ್ಪು ನೀಡುವಂತೆ ಸರ್ಕಾರ ಒತ್ತಡ ಹೇರಲು ಸಾಧ್ಯವಿಲ್ಲ. ಎಚ್.ಕೆ.ಪಾಟೀಲ್ ಅವರೂ ಕಾನೂನು ಸಚಿವರಾಗಿ ಕಾರ್ಯ ನಿರ್ವಹಿಸಿದ್ದರು ಎಂದು ತಿರುಗೇಟು ನೀಡಿದ್ದಾರೆ.

ಬಹಿರಂಗವಾಗಿ ಚರ್ಚಿಸದಂತೆ ಸೂಚನೆ

ರಾಮನಗರ ಜಿಲ್ಲೆಯ ಕಪಾಲಿ ಬೆಟ್ಟದಲ್ಲಿ ಡಿ.ಕೆ.ಶಿವಕುಮಾರ್ ವಿಶ್ವದಲ್ಲಿಯೇ ಅತಿ ಎತ್ತರದ ಏಸುಕ್ರಿಸ್ತನ ಮೂರ್ತಿ ಪ್ರತಿಷ್ಠಾಪಿಸಲು ನಿರ್ಧರಿಸಿರುವ ಬಗ್ಗೆ ಆನಗತ್ಯ ಹೇಳಿಕೆ ನೀಡದಂತೆ ಸಂಪುಟ ಸಹೋದ್ಯೋಗಿಗಳಿಗೆ ಸಿಎಂ ಯಡಿಯೂರಪ್ಪ ಸೂಚಿಸಿದ್ದಾರೆಂದು ತಿಳಿದು ಬಂದಿದೆ. ಕಪಾಲ ಬೆಟ್ಟದ ವಿಷಯ ಧಾರ್ಮಿಕ ಭಾವನೆಗಳಿಗೆ ಸಂಬಂಧಿಸಿರುವುದರಿಂದ ಅದೇ ವಿಷಯವನ್ನು ಮುಂದಿಟ್ಟುಕೊಂಡು ಕಾಂಗ್ರೆಸ್ ಹಾಗೂ ಡಿ.ಕೆ. ಶಿವಕುಮಾರ್ ಲಾಭ ಪಡೆದುಕೊಳ್ಳಲು ಅವಕಾಶ ದೊರೆಯುವಂತಾಗಬಾರದು. ಈಗಾಗಲೇ ಪೌರತ್ವ ಕಾಯ್ದೆ ತಿದ್ದುಪಡಿ ವಿಷಯ ಗೊಂದಲಕ್ಕೆ ಕಾರಣವಾಗಿರುವುದರಿಂದ, ಏಸು ಕ್ರಿಸ್ತನ ಪ್ರತಿಮೆ ವಿಷಯವೂ ಮತ್ತಷ್ಟು ಗೊಂದಲ ಸೃಷ್ಟಿಗೆ ಕಾರಣವಾಗಬಾರದು ಎಂದು ಯಡಿಯೂರಪ್ಪ ಸಂಪುಟದ ಸಚಿವರಿಗೆ ಕಿವಿ ಮಾತು ಹೇಳಿದ್ದಾರೆನ್ನಲಾಗಿದೆ.

> ಇಸ್ಕಾನ್‌ನವರು ಥೀಮ್ ಪಾರ್ಕ್ ಮಾಡಲು ಮುಂದಾದಾಗ ಡಿ.ಕೆ. ಶಿವಕುಮಾರ್ ಕಿರುಕುಳ ನೀಡಿ ಆ ಯೋಜನೆ ಸ್ಥಗಿತಗೊಳ್ಳುವಂತೆ ಮಾಡಿದರು. ನಮಗೆ ಕೃಷ್ಣನೂ ಒಂದೇ ಏಸುವೂ ಒಂದೇ. ಆದರೆ, ಗೋಮಾಳ ಜಮೀನು ದುರುಪಯೋಗವಾಗಿರುವ ಬಗ್ಗೆ ಕಂದಾಯ ಸಚಿವರು ತನಿಖೆಗೆ ಆದೇಶ ನೀಡಿದ್ದಾರೆ. [redacted] ವರದಿ ಬಂದ ನಂತರ [redacted] ಕೈಗೊಳ್ಳಲಾಗುವುದು.
>
> ● ಸಿ.ಟಿ.ರವಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ

ಟರ್ಫ್ ಕ್ಲಬ್ ದಂಡ ವಸೂಲಿಗೆ ತೀರ್ಮಾನ

ಬೆಂಗಳೂರು: ಟರ್ಫ್ ಕ್ಲಬ್‌ನಿಂದ ಬರಬೇಕಿರುವ 37.46 ಕೋಟಿ ರೂ. ಬಾಕಿ ಹಣ ವಸೂಲಿ ಮಾಡಲು ಸಂಪುಟದಲ್ಲಿ ತೀರ್ಮಾನಿಸಲಾಗಿದೆ ಎಂದು ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ ಹೇಳಿದರು.

ಬೆಂಗಳೂರು ಟರ್ಫ್ ಕ್ಲಬ್ ಗುತ್ತಿಗೆ ಅವಧಿ 2009 ರ ಡಿ.31ಕ್ಕೆ ಮುಕ್ತಾಯವಾಗಿದೆ. ಆದರೆ, ಅವರು ಯಾವುದೇ ರೀತಿಯ ಕ್ರಮ ಕೈಗೊಳ್ಳದಂತೆ ಕೋರ್ಟ್‌ನಿಂದ ತಡೆಯಾಜ್ಞೆ ತಂದಿದ್ದಾರೆ. ಟರ್ಫ್ ಕ್ಲಬ್ ಸ್ಥಳಾಂತರಿಸುವ ಕುರಿತು ಈಗಾಗಲೇ ನಿರ್ಧಾರವಾಗಿದೆ. ಆದರೆ, ಅವರನ್ನು ಸ್ಥಳಾಂತರ ಮಾಡುವುದು ಹಾಗೂ ದಂಡ ವಸೂಲಿ ಏಕಕಾಲಕ್ಕೆ ಮಾಡಲು ಬರುವುದಿಲ್ಲ ಎಂದು ಅಡ್ವೋಕೇಟ್ ಜನರಲ್ ಸಲಹೆ ನೀಡಿದ್ದರಿಂದ ಮೊದಲು ದಂಡ ವಸೂಲಿ ಮಾಡಲು ತೀರ್ಮಾನಿಸಲಾಗಿದೆ. ಟರ್ಫ್ ಕ್ಲಬ್ ಸ್ಥಳಾಂತರ ನಿರ್ಧಾರದಿಂದ ಸರ್ಕಾರ ಹಿಂದೆ ಸರಿದಿಲ್ಲ ಎಂದು ಸ್ಪಷ್ಟಪಡಿಸಿದರು.

ತೀರ್ಮಾನವಿಲ್ಲ: ಬೆಂಗಳೂರು ಟರ್ಫ್ ಕ್ಲಬ್‌ನವರು ವಾರ್ಷಿಕ ಆದಾಯದಲ್ಲಿ ಶೇ.2 ರಷ್ಟು ರಾಜ್ಯ ಸರ್ಕಾರಕ್ಕೆ ಬಾಡಿಗೆ ನೀಡುವಂತೆ ಸೂಚಿಸಲಾಗಿತ್ತು. ಆದರೆ, ಲಾಭದಲ್ಲಿ ಶೇ.2 ರಷ್ಟು ನೀಡಲು ಮನವಿ ಮಾಡಿದ್ದಾರೆ. ಆದರೆ, ಈ ಬಗ್ಗೆ ಯಾವುದೇ ತೀರ್ಮಾನ ತೆಗೆದುಕೊಂಡಿಲ್ಲ ಎಂದರು.



ಟರ್ಫ್ ಕ್ಲಬ್ ಪ್ರತಿನಿಧಿಗಳಿಂದ ಸಿಎಂ ಭೇಟಿ

ಬೆಂಗಳೂರು ಟರ್ಫ್ ಕ್ಲಬ್ ಬಾಡಿಗೆ ಬಾಕಿ ಉಳಿಸಿಕೊಂಡಿರುವುದರಿಂದ ಟರ್ಫ್ ಕ್ಲಬ್ ಚಟುವಟಿಕೆ ಸ್ಥಗಿತಗೊಳಿಸಲು ಸರ್ಕಾರ ತೀರ್ಮಾನ ಮಾಡಿದೆ. ಹೀಗಾಗಿ ಟರ್ಫ್ ಕ್ಲಬ್ ಪದಾಧಿಕಾರಿಗಳು ಸೋಮವಾರ ಸಂಪುಟ ಸಭೆಗೂ ಮುನ್ನ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ವಿಧಾನಸೌಧದಲ್ಲಿ ಭೇಟಿ ಮಾಡಿ, ಟರ್ಫ್ ಕ್ಲಬ್ ಚಟುವಟಿಕೆ ಸ್ಥಗಿತಗೊಳಿಸದಂತೆ ಮನವಿ ಮಾಡಿದ್ದಾರೆ. ಆದರೆ, ಮುಖ್ಯಮಂತ್ರಿ ಕಪ್ ರೇಸ್ ಆಯೋಜಿಸಲು ತೀರ್ಮಾನಿಸಿದ್ದು ರೇಸ್‌ಗೆ ಚಾಲನೆ ನೀಡಲು ಮುಖ್ಯಮಂತ್ರಿಗೆ ಆಹ್ವಾನ ನೀಡಲು ಬಂದಿದ್ದೆವು ಎಂದು ಟರ್ಫ್ ಕ್ಲಬ್ ಪ್ರತಿನಿಧಿಗಳು ತಿಳಿಸಿದ್ದಾರೆ.

30 ವರ್ಷಕ್ಕೆ ಗುತ್ತಿಗೆ: ಇದೇ ವೇಳೆ, ಬೆಂಗಳೂರು ಟರ್ಫ್ ಕ್ಲಬ್ ಗುತ್ತಿಗೆ ಅವಧಿಯನ್ನು 30 ವರ್ಷಗಳಿಗೆ ವಿಸ್ತರಿಸಲಾಗಿದ್ದು, ವಾರ್ಷಿಕ ಲಾಭದ ಶೇ.2 ರಷ್ಟು ಸರ್ಕಾರಕ್ಕೆ ಆದಾಯ ನೀಡುವ ಒಪ್ಪಂದ ಮಾಡಿಕೊಂಡು 30 ವರ್ಷಕ್ಕೆ ಗುತ್ತಿಗೆ ಅವಧಿ ವಿಸ್ತರಿಸಲಾಗಿದೆ ಎಂದು ಹೇಳಿದರು.

ಬೆಂಗಳೂರಿನಲ್ಲಿ ಅಂಬೇಡ್ಕರ್ ವಸತಿ ಯೋಜನೆಯಡಿ ಫಲಾನುಭವಿಗಳ ಆದಾಯ ಮಿತಿಯನ್ನು 87 ಸಾವಿರದಿಂದ 3 ಲಕ್ಷ ರೂ.ವರೆಗೆ ಹೆಚ್ಚಿಸಲು ತೀರ್ಮಾನಿಸಲಾಗಿದ್ದು, 3 ಲಕ್ಷದವರೆಗೂ ಆದಾಯ ಇರುವವರು ಅರ್ಜಿ ಹಾಕಬಹುದೆಂದರು.

3 ಅಂತಸ್ತಿಗೆ ಸೀಮಿತ: ಮುಖ್ಯಮಂತ್ರಿ [redacted] ಯೋಜನೆಯಲ್ಲಿ 14 ಅಂತಸ್ತಿನ [redacted] ಬದಲು 3 ಅಂತಸ್ತಿಗೆ ಸೀಮಿತಗೊಳಿಸಲು ನಿರ್ಧರಿಸಲಾಗಿದೆ. ಆರ್ಥಿಕವಾಗಿ ದುರ್ಬಲವಾಗಿರುವ ಸಮುದಾಯಗಳಿಗೆ 14 ಅಂತಸ್ತಿನ ಮಹಡಿ ಕಟ್ಟಡಗಳ ನಿರ್ವಹಣೆ ಕಷ್ಟವಾಗುವುದರಿಂದ ಈಗಾಗಲೇ ಅರ್ಜಿ ಹಾಕಿರುವ ಮನೆ ಹೊರತು ಪಡಿಸಿ ಮುಂದೆ ನಿರ್ಮಾಣವಾಗುವ ಮನೆಗಳಿಗೆ ಜಿ +3 ಗೆ ಮಿತಿ ಹೇರಲು ತೀರ್ಮಾನಿಸಲಾಗಿದೆ ಎಂದು ಹೇಳಿದರು.